ನಿರ್ದೇಶಕರು
ಅಲ್ಪಸಂಖ್ಯಾತರ ನಿರ್ದೇಶನಾಲಯ
ನಂ 16 ಸಿ, ಮಿಲ್ಲರ್ ಟ್ಯಾಂಕ್ ಬೆಡ್ ರಸ್ತೆ
ವಸಂತನಗರ. ಬೆಂಗಳೂರು 560 052

ಕರ್ನಾಟಕ ಸರ್ಕಾರ

ದೂರವಾಣಿ:080- 22864212.
ಫ್ಯಾಕ್ಸ್: 080-22863618
Email:directorgokdom@gmail.com
Web: www.gokdom.kar.nic.in

ಸಂಖ್ಯೆ:ಅಸಂನಿ/ಅ/ವಿದ್ಯಾಸಿರಿ/ಸಿಆರ್-44/2022-23 ದಿನಾಂಕ:17.09.2022

ಗೆ,
ಜಿಲ್ಲಾ ಅಧಿಕಾರಿಗಳು,
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,
.................................. ಜಿಲ್ಲೆ

ಮಾನ್ಯರೆ,

ವಿಷಯ:- 2022-23ನೇ ಸಾಲಿಗೆ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಯೋಜನೆಯಡಿ ಅರ್ಜಿಗಳನ್ನು ಅಹ್ವಾನಿಸುವ ಬಗ್ಗೆ.

ಉಲ್ಲೇಖ:- ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲುಡಿ 163 ಎಂಡಿಎಸ್ 2015, ದಿ: 21.09.2015

**********

ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಆದೇಶದಲ್ಲಿ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಕಾರ್ಯಕ್ರಮವನ್ನು ಜಾರಿಗೊಳಸಲು ಆದೇಶಿಸಲಾಗಿದೆ. 2022-23ನೇ ಸಾಲಿನಲ್ಲಿ ಸೇವಾಸಿಂಧು ಪೋರ್ಟಲ್ ಆನ್‌ಲೈನ್‌ನಲ್ಲಿ **(https://sevasindhu.karnataka.gov.in)** ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆದುದರಿಂದ, ತಮ್ಮ ಜಿಲ್ಲೆಗಳಲ್ಲಿ ಸದರಿ ಕಾರ್ಯಕ್ರಮಕ್ಕಾಗಿ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ವ್ಯಾಪಕ ಪ್ರಚಾರ ನೀಡಿ ಅರ್ಜಿಗಳನ್ನು ಅಹ್ವಾನಿಸಲು ತಿಳಿಸಿದೆ.

ಷರತ್ತುಗಳು:-

1) ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲುಡಿ 163 ಎಂಡಿಎಸ್ 2015, ದಿ: 21.09.2015ರಲ್ಲಿ ನೀಡಲಾಗಿರುವ ಮಾರ್ಗಸುಚಿಯನ್ವಯ ಸದರಿ ಯೋಜನೆಗೆ ಅನುಷ್ಠಾನಗೊಳಸತಕ್ಕದ್ದು.
2) **ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲುಡಿ 163 ಎಂಡಿಎಸ್ 2015, ದಿ: 21.09.2015ರ ಮಾರ್ಗಸೂಚಿಯಂತೆ** ವಿದ್ಯಾರ್ಥಿಗಳು ಗ್ರಾಮೀಣ ಪ್ರದೇಶದವರಾಗಿರಬೇಕು ಹಾಗೂ ವ್ಯಾಸಂಗ ಮಾಡುವ ಕಾಲೇಜಿನಿಂದ ಕನಿಷ್ಠ 5 ಕಿ.ಮೀ ದೂರದವರಾಗಿರಬೇಕು. ಆದರೆ, ವಿದ್ಯಾರ್ಥಿಯ ಸ್ವಂತ ಸ್ಥಳ, ನಗರ/ಪಟ್ಟಣ ಆಗಿದ್ದು, ಅವರು ಬೇರೆ ನಗರ/ಪಟ್ಟಣದಲ್ಲಿರುವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿದ್ದಲ್ಲಿ, ಅಂತಹವರು ಈ ಸೌಲಭ್ಯಕ್ಕೆ ಅರ್ಹರಿರುತ್ತಾರೆ (ಒಂದೇ ನಗರದ ವ್ಯಾಪ್ತಿಯಲ್ಲಿ ಇರುವವರು ಅರ್ಹರಿರುವುದಿಲ್ಲ)
3) ಸ್ವೀಕೃತವಾದ ಅರ್ಹ ಅರ್ಜಿಗಳನ್ನು ಹಿಂದಿನ ವರ್ಷದ ವಾರ್ಷಿಕ/ಸೆಮಿಸ್ಟರ್ ತರಗತಿಯಲ್ಲಿ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಗೆ ಇಳಿಕೆ ಕ್ರಮಾನುಸಾರ (Descending Order)ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುವ ಕೋರ್ಸ್‌ಗಳ ಆಧಾರ ಮೇಲೆ ಪಟ್ಟಿಯನ್ನು ಸಿದ್ಧಪಡಿಸುವುದು.

ಪು.ತಿ.ನೋ